ಶ್ರೀ ಪಿ.ಜಿ.ಆರ್. ಸಿಂಧ್ಯ(ಬೃಹತ್, ಮಧ್ಯಮ, ಸಣ್ಣ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯಗಳ ಸಚಿವರು):

ಅ) ಸರ್ಕಾರಿ ಸ್ವಾಮ್ಯದಲ್ಲಿ ಯಾವುದೆ ಹೊಸ ಉದ್ಯಮೆಗಳನ್ನು ಪ್ರಾರಂಭಿಸುವ ಉದ್ದೇಶವಿರುವುದಿಲ್ಲ.

ಆ) 1. ಪಾವಗಡ ತಾಲ್ಲೂಕಿನಲ್ಲಿ ಖಾಸಗಿ ವಲಯದಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಹಾಗೂ ಸ್ವಯಂ ಉದ್ಯೋಗ ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಸ್ಥಳೀಯ ಉದ್ಯಮಿಗಳಿಗೆ ಹಾಗೂ ಸ್ಥಳೀಯ ನಿರುದ್ಯೋಗಿ ಯುವಕ ಯುವತಿಯರಿಗೆ ನೆರವು ನೀಡಲಾಗುವುದು.

2. 2001–2006ರ ಕೈಗಾರಿಕೆ ನೀತಿ ಅನ್ವಯ ಪಾವಗಡ ತಾಲ್ಲೂಕನ್ನು ಕೈಗಾರಿಕೆಯಲ್ಲಿ ಹಿಂದುಳಿದಿರುವ 'ಸಿ' ವಲಯವೆಂದು ಘೋಷಿಸಲಾಗಿದ್ದು ಇಲ್ಲಿ ಸ್ಥಾಪಿಸಲ್ಪಡುವ ಕೈಗಾರಿಕೆಗಳಿಗೆ ತೆರಿಗೆ ವಿನಾಯಿತಿ ಮತ್ತು ಸಹಾಯಧನ ಮುಂತಾದ ಸವಲತ್ತುಗಳನ್ನು ನೀಡಲಾಗುತ್ತಿದೆ.

3. ಡಾ: ಡಿ.ಎಂ. ನಂಜುಂಡಪ್ಪ ವರದಿ ಅನ್ವಯ ಈ ತಾಲ್ಲೂಕು ಅತಿ ಹೆಚ್ಚು ಹಿಂದುಳಿದ ವರ್ಗಕ್ಕೆ ಸೇರಿದ್ದು, ಈ ತಾಲ್ಲೂಕಿನ ಕೈಗಾರಿಕೀಕರಣ ಯೋಜನೆಯನ್ನು ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದ " ಕೈಗಾರಿಕಾ ವಿಕಾಸ " ಯೋಜನೆಯಡಿಯಲ್ಲಿ ಕೈಗೊಳ್ಳಲಾಗುವುದು.

1874(2426) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಾಮರಾಜನಗರ ಜಿಲ್ಲೆಯು ಸೇರಿದಂತೆ ರಾಜ್ಯಾದ್ಯಂತ ಇರುವ ಮೇಲುಸಕ್ಕರೆ ಶೆಟ್ಟರ್ ಜನಾಂಗದ ಸಮಗ್ರ ಉನ್ನತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಆ) ಮೇಲುಸಕ್ಕರೆ ಶೆಟ್ಟರ್ ಜನಾಂಗದವರು ಆರ್ಥಿಕವಾಗಿ ಹಿಂದುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ರಾಜ್ಯದಲ್ಲಿರುವ ಮೇಲುಸಕ್ಕರೆ ಶೆಟ್ಟರ್ ಜನಾಂಗದವರಿಗೆ ವಿಶೇಷವಾಗಿ ಯೋಜನೆಯನ್ನು ತಯಾರಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ?

ಡಾ. ವೈ. ನಾಗಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಪ್ರಸ್ತುತ ರಾಜ್ಯದಲ್ಲಿ ಜಾರಿಯಲ್ಲಿರುವ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಮೇಲು ಸಕ್ಕರೆ ಶೆಟ್ಟರ್ ಜಾತಿಯು ಸೇರಿರುವುದಿಲ್ಲ.

ಆ) ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

1875(2433) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ): ಮಾನ್ಯ ಭಾರಿ, ಮಧ್ಯಮ, ಮತ್ತು ಸಣ್ಣ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಹಿಂದುಳಿದ ಗಡಿ ಪ್ರದೇಶ ಚಾಮರಾಜನಗರದಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಆ) ರಾಜ್ಯದಲ್ಲಿ ಇರುವ ಭಾರಿ ಮತ್ತು ಮಧ್ಯಮ ಹಾಗೂ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು;

ಇ) ಯಾವ ದರ್ಜೆಯ ಕೈಗಾರಿಕೆಗಳನ್ನು ಮುಚ್ಚಲಾಗಿದೆ;

ಈ) ನೂತನ ವಿದ್ಯುತ್ ಕಾರ್ಖಾನೆ ಹಾಗೂ ಮೈಸೂರು ಲ್ಯಾಂಪ್ಸ್ ಕಾರ್ಖಾನೆಗಳನ್ನು ಪುನಃಶ್ಚೇತನಗೊಳಿಸಲು ಸರ್ಕಾರವು ಯೋಚಿಸಲಾಗಿದೆಯೇ;

ಶ್ರೀ ಪಿ.ಜಿ.ಆರ್.ಸಿಂಧ್ಯ (ಭಾರಿ, ಮಧ್ಯಮ ಮತ್ತು ಸಣ್ಣ ಕೈಗಾರಿಕೆಗಳು ಮತ್ತು ಮೂಲಭೂತ ಸೌಲಭ್ಯಗಳ ಸಚಿವರು):

ಅ) ಪ್ರಾದೇಶಿಕ ಅಸಮತೋಲನದ ಬಗ್ಗೆ ಅಧ್ಯಯನ ನಡೆಸಿದ ಡಾ: ನಂಜುಂಡಪ್ಪ ಸಮಿತಿಯು ಚಾಮರಾಜನಗರ ತಾಲ್ಲೂಕನ್ನು ಅತಿ ಹಿಂದುಳಿದ ತಾಲ್ಲೂಕು ಎಂದು ಗುರುತಿಸಿದೆ. ಈ ಪ್ರದೇಶದಲ್ಲಿ ತೀವ್ರ ಕೈಗಾರೀಕೀಕರಣಕ್ಕಾಗಿ ಒಂದು ಕ್ರಿಯಾ ಯೋಜನೆಯನ್ನು ತಯಾರಿಸಲಾಗಿದೆ. ಜಿಲ್ಲೆಯಲ್ಲಿ ದೊರಕುವ ಸಂಪನ್ಮೂಲಗಳನ್ನು ಆಧರಿಸಿ (I) ಗಾರ್ಮೆಂಟ್ ಸಮೂಹ (ಲಂಬಾಣಿ ಡ್ರೆಸ್ ಸೇರಿದಂತೆ), (II) ನಾರು ಸಮೂಹ, (III) ರೇಷ್ಮೆ ಮತ್ತು ಹತ್ತಿ ನೇಯ್ಗೆ ಸಮೂಹಗಳು ಮತ್ತು (IV) ಅಗರಬತ್ತಿ ಸಮೂಹಗಳನ್ನು ಗುರುತಿಸಿ ಅಭಿವೃದ್ಧಿಪಡಿಸಲು ನಿರ್ಧರಿಸಲಾಗಿದೆ. 2001–06ರ ಕೈಗಾರಿಕಾ ನೀತಿಯಂತೆ ಚಾಮರಾಜನಗರ ತಾಲ್ಲೂಕನ್ನು "ಸಿ" ವಲಯದಲ್ಲಿ ಗುರುತುಪಡಿಸಿದ್ದು (ಹಿಂದುಳಿದ ಪ್ರದೇಶಗಳು) ಅತಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಉತ್ತೇಜನ ಮತ್ತು ರಿಯಾಯಿತಿಗಳನ್ನು ನೀಡಲಾಗುತ್ತಿದೆ. ಹೊಸದಾಗಿ ಸ್ಥಾಪಿಸಲಾಗುವ ಅತಿ ಸಣ್ಣ ಕೈಗಾರಿಕೆಗಳಿಗೆ 5 ವರ್ಷಗಳವರೆಗೆ ಪ್ರವೇಶ ತೆರಿಗೆ ವಿನಾಯಿತಿ ಮತ್ತು ಹೂಡಿದ ಒಟ್ಟು ಸ್ಥಿರ ಬಂಡವಾಳದ ಮೇಲೆ ಶೇ.20ರಷ್ಟು ಗರಿಷ್ಠ ರೂ.10.00 ಲಕ್ಷಗಳವರೆಗೆ ಸಹಾಯಧನವನ್ನು ನೀಡಲಾಗುತ್ತಿದೆ.

ಆ) ರಾಜ್ಯದಲ್ಲಿ ಇರುವ ಭಾರಿ ಮತ್ತು ಮಧ್ಯಮ ಕೈಗಾರಿಕೆಗಳ ಸಂಖ್ಯೆ.1044 ಹಾಗೂ 317576 ಸಣ್ಣ ಕೈಗಾರಿಕೆಗಳು ನೊಂದಣಿಯಾಗಿರುತ್ತವೆ.

ಇ) ಭಾರತದಾದ್ಯಂತ ನಡೆಸಿದ 3ನೇ ಗಣತಿ ವರದಿ ಆಧಾರದಂತೆ ಶೇ.62,35ರಷ್ಟು ನೋಂದಾಯಿಸಿದ ಘಟಕಗಳು ಕಾರ್ಯನಿರ್ವಹಿಸುತ್ತಿದ್ದು, ಶೇ.37.65 ಘಟಕಗಳು ಮುಚ್ಚಿದ್ದು, ಶೇ.2.5ರಷ್ಟು ಘಟಕಗಳು ರೋಗಗ್ರಸ್ಥವಾಗಿವೆ.

ಈ) ಇಲ್ಲ.

1877(2634) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ): ಮಾನ್ಯ ಬೃಹತ್, ಮಧ್ಯಮ, ಮತ್ತು ಸಣ್ಣ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಎಲ್ಲಾ ಕೈಗಾರಿಕೆಗಳು ಕೇಂದ್ರೀಕೃತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಭಾರಿ ಪ್ರಮಾಣದಲ್ಲಿ ಕಾರ್ಖಾನೆಗಳು ಬೆಂಗಳೂರು ಸುತ್ತ ಇರುವುದರಿಂದ ಪರಿಸರಕ್ಕೆ ತೀವ್ರ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?